# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ : ಸ.ಅ/ವಾರ್ಡ್ ಸಮಿತಿ ಸಭೆ/2020–21 ದಿನಾಂಕ : 03–03–2021

## –: ಸಭಾ ಸೂಚನಾ ಪತ್ರ :–

ಉಲ್ಲೇಖ : 1) ಮಾನ್ಯ ಆಯುಕ್ತರ ಕಛೇರಿಯ ತಿದ್ದುಪಡಿ ಆದೇಶ ಸಂಖ್ಯೆ : ಬಿ12(5)ಪಿಆರ್/35/ 2020–21 ದಿನಾಂಕ : 02–10–2020.

–****–

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ, ಸರ್ವಜ್ಞನಗರ ವಿಭಾಗ, ಮಾರುತಿಸೇವಾನಗರ ಉಪವಿಭಾಗ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ–29 ಕಾಚರಕನಹಳ್ಳಿಯ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ : 06–03–2021 ಶನಿವಾರ ರಂದು ಬೆಳಿಗ್ಗೆ 10–30 ಗಂಟೆಗೆ ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ನಿಯೋಜಿಸಿರುವ ವಾರ್ಡ್‌ನ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ, ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ಸದರಿ ಸಭೆಗೆ ಎಲ್ಲಾ ಸದಸ್ಯರು ಸಕಾಲದಲ್ಲಿ ಆಗಮಿಸಿ ಸಭೆಯನ್ನು ಯಶಸ್ವಿಗೊಳಿಸಲು ಕೋರಿದೆ.

## –: ಸಭಾ ಅಜೆಂಡಾ :–

| | |
|---|---|
| 1 | ವಾರ್ಡಿನ ವಿವಿಧ ಬಡಾವಣೆಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ. |
| 2 | ವಾರ್ಡಿನ ಘನತ್ಯಾಜ್ಯ ನಿರ್ವಹಣೆಯ ಬಗ್ಗೆ. |
| 3 | ಕಂದಾಯ ಇಲಾಖೆಗೆ ಸಂಬಂಧಿಸಿದ ಬಗ್ಗೆ. |
| 4 | ನೀರು ಸರಬರಾಜು ಮತ್ತು ಒಳಚರಂಡಿಗೆ (BWSSB) ಸಂಬಂಧಿಸಿದ ವಿಷಯಗಳ ಬಗ್ಗೆ. |
| 5 | ವಿದ್ಯುತ್ ಸರಬರಾಜು (Bescom) ಸಂಬಂಧಿಸಿದ ವಿಷಯಗಳ ಬಗ್ಗೆ. |
| 6 | ಉದ್ಯಾನವನ ಮತ್ತು ಬೀದಿ ದೀಪ ನಿರ್ವಹಣೆಯ ಕುರಿತು |
| 7 | Traffic isues and Law and Order issues |
| 8 | ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ಬಗ್ಗೆ ಚರ್ಚಿಸುವ ಬಗ್ಗೆ. |
| 9 | ಮಾನ್ಯ ನೋಡಲ್ ಅಧಿಕಾರಿಯವರ ಅಪ್ಪಣೆ ಮೇರೆಗೆ ಚರ್ಚಿಸಬಹುದಾದ ಇತರೆ ವಿಷಯಗಳು. |

(ನೋಡಲ್ ಅಧಿಕಾರಿ ರವರ ಆದೇಶದ ಮೇರೆಗೆ)

ಸಹಿ/–
ಕಾರ್ಯದರ್ಶಿ ವಾರ್ಡ್ ಸಮಿತಿ–29
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್–29

Office of Assistant Executive Engineer, B.W.S.S.B, East-2-1 Subdivision, H.R.B.R Layout Bangalore. Sl.No: Date 04/3/21

4/3/2021

ಪ್ರತಿಯನ್ನು:–

1. ಶ್ರೀಮತಿ ಸರ್ವಜ್ಞ ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ರೆಸಿಡೆಂಟ್ಸ್ ಅಸೋಸಿಯೇಷನ್ ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.

N. Ash JE LRP 4/3/21

HC 9060 4/3/2021

Traffic Police Station, Banaswadi, Bengaluru

East Zone Date: 4/3/2021

4/3/21

2. ಶ್ರೀ ಉತ್ತಪ್ಪ, ಸದಸ್ಯರು (ಅಧ್ಯಕ್ಷರು, ಹೆಚ್.ಆರ್.ಬಿ.ಆರ್ 3ನೇ ಬ್ಲಾಕ್ ಅಸೋಸಿಯೇಷನ್) ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.
3. ಶ್ರೀ ಪಿಳ್ಳಪ್ಪ(ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.
4. ಶ್ರೀ ಪ್ರಸನ್ನ, ಪದಾಧಿಕಾರಿಗಳು, ಹೆಚ್.ಬಿ.ಆರ್ ಬಡಾವಣೆ, 1ನೇ ಹಂತ ಅಸೋಸಿಯೇಷನ್ (ರಿ) ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.
5. ವಾರ್ಡ್ ಸಮಿತಿಯ ಎಲ್ಲಾ ಸದಸ್ಯರುಗಳ ಮಾಹಿತಿಗಾಗಿ ಹಾಗೂ ಸಭೆಯಲ್ಲಿ ಭಾಗವಹಿಸಲು ಕೋರಿದೆ.
6. ಕಲ್ಯಾಣಾಧಿಕಾರಿಗಳು, ಪೂರ್ವ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ
7. ಅರಣ್ಯ ಸಂರಕ್ಷಣಾಧಿಕಾರಿಗಳು, ಪೂರ್ವ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ
8. ಸಹಾಯಕ ಕಾರ್ಯಪಾಲಕ ಅಭಿಯಂತರರು, (BWSSB) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, (Bescom) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ (SWM) (ಸರ್ವಜ್ಞನಗರ), ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
11. ಸಹಾಯಕ ಕಂದಾಯ ಅಧಿಕಾರಿಗಳು, ಹೆಚ್.ಬಿ.ಆರ್ ಲೇಔಟ್ ಉಪವಿಭಾಗ, ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂದಿಯನ್ನು ನಿಯೋಜಿಸಲು ಕೋರಿದೆ.
12. ಪೋಲೀಸ್ ಇನ್ಸ್‌ಫೆಕ್ಟರ್ (ಸಂಚಾರ) ಬಾಣಸವಾಡಿ ಪೋಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
13. ಪೋಲೀಸ್ ಇನ್ಸ್‌ಫೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೋಲೀಸ್ ಠಾಣೆ ರವರು ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ರಸ್ತೆಗಳು ಮತ್ತು ಮೂಲಭೂತ ಸೌಕರ್ಯಗಳು ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
15. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ (SWD) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
16. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೀದಿ ದೀಪಗಳ ವಿಭಾಗ-ಪೂರ್ವ), ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
17. ಆರೋಗ್ಯ ವೈದ್ಯಾಧಿಕಾರಿಗಳು, ಕಾಚರಕನಹಳ್ಳಿ ರವರು ಖುದ್ದಾಗಿ ಹಾಜರಾಗಲು ಕೋರಿದೆ.
18. ತೋಟಗಾರಿಕಾ ಅಧಿಕಾರಿಗಳು, ಬೆಂಗಳೂರು ಪೂರ್ವ ರವರ ಮಾಹಿತಿಗಾಗಿ ಮತ್ತು ವಾರ್ಡ್ ಸಮಿತಿ ಸಭೆಗೆ ಹಾಜರಾಗಲು ಕಳುಹಿಸಿದೆ.
19. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ರಸ್ತೆ ಹಾಗೂ ಮೂಲಭೂತ ಸೌಕರ್ಯ, ಕೇಂದ್ರ (ಯೋಜನೆ) (White Topping) ರವರ
20. ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ ರವರ ಮಾಹಿತಿಗಾಗಿ ರವಾನಿಸಿದೆ.

2/3/2021

**ಕಾರ್ಯದರ್ಶಿ ವಾರ್ಡ್ ಸಮಿತಿ-29**
**ಹಾಗೂ ಸಹಾಯಕ ಅಭಿಯಂತರರು,**
**ವಾರ್ಡ್-29**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಛೇರಿಯ ಸಭಾಂಗಣವಲ್ಲಿ ದಿನಾಂಕ: 06-03-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಸದಸ್ಯರು.**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ. ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು.
2. ಶ್ರೀ.ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು.
3. ಶ್ರೀ.ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು.
4. ಶ್ರೀ.ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
5. ಶ್ರೀ ಪ್ರಸನ್ನ, ಪದಾಧಿಕಾರಿಗಳು, ಹೆಚ್.ಬಿ.ಆರ್ ಬಡಾವಣೆ, 1ನೇ ಹಂತ ಅಸೋಸಿಯೇಷನ್ (ರಿ) ರವರು
6. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),
7. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್,

**ಹಾಜರಿದ್ದ ಅಧಿಕಾರಿಗಳು**

1. ಶ್ರೀ.ದವಲ್, ಸಹಾಯಕ ಅಭಿಯಂತರರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ),
2. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
3. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
4. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
5. ಸಬ್ ಇನ್ಸ್‌ಪೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ವೆಂಕಟೇಶ್, ತೋಟಗಾರಿಕಾ ಇಲಾಖೆ,
7. ಶ್ರೀಮತಿ ಗೀತಾ, ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ.
8. ಶ್ರೀ ಪುಟ್ಟಸ್ವಾಮಿ, ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ.
9. ಶ್ರೀಮತಿ ರಾಜಶ್ರಿ, ಕಲ್ಯಾಣ ಇಲಾಖೆ

ಈ ಸಭೆಗೆ ಹಾಜರಾಗಿದ್ದ ಮೇಲ್ಕಂಡ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1) **ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿ ಸ್ವಚ್ಛತಾ ಕಾಮಗಾರಿಗಳಾದ ರಸ್ತೆ ಗುಡಿಸುವುದು, ಕಸವನ್ನು ಸಂಸ್ಕರಿಸುವುದು, ಬೆಂಗಳೂರು ಜಲ ಮಂಡಳಿ ವಿಭಾಗದಲ್ಲಿ ಒಳಚರಂಡಿ ಪೈಪ್‌ಲೈನ್‌ಗಳನ್ನು ಹಾಗೂ ಮ್ಯಾನ್‌ಹೋಲ್‌ಗಳನ್ನು ಸ್ವಚ್ಛಗೊಳಿಸಲು ಸ್ಕಾವೆಂಜರ್ಸ್‌ಗಳ ಮುಖಾಂತರ ಸ್ವಚ್ಛಗೊಳಿಸುತ್ತಿರುವುದು ಗಮನಕ್ಕೆ ಬಂದಿರುವುದಾಗಿ ಸಭಾ ಗಮನಕ್ಕೆ ತಂದಾಗ ಈ ಬಗ್ಗೆ ಕೂಲಂಕುಷವಾಗಿ ಚರ್ಚಿಸಿ, ಒಳಚರಂಡಿ ಪೈಪ್‌ಲೈನ್‌ಗಳನ್ನು ಹಾಗೂ ಮ್ಯಾನ್‌ಹೋಲ್‌ಗಳನ್ನು ಸ್ವಚ್ಛಗೊಳಿಸಲು ಸ್ಕಾವೆಂಜರ್ಸ್‌ಗಳನ್ನು ಉಪಯೋಗಿಸುವುದು ಅಕ್ಷಮ್ಯ ಅಪರಾಧವಾಗಿರುತ್ತದೆ ಎಂದು ಸಭೆಯಲ್ಲಿ ಚರ್ಚಿಸುವಾಗ, ಸಭೆಯಲ್ಲಿ ಹಾಜರಿದ್ದ ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಮಾತನಾಡಿ ಪ್ರಸ್ತುತ ಒಳಚರಂಡಿ ಪೈಪ್‌ಲೈನ್‌ಗಳನ್ನು ಹಾಗೂ ಮ್ಯಾನ್‌ಹೋಲ್‌ಗಳನ್ನು ಸ್ವಚ್ಛಗೊಳಿಸಲು ಆಧುನಿಕ ಯಂತ್ರಗಳನ್ನು ಉಪಯೋಗಿಸಲಾಗುತ್ತಿರುತ್ತದೆ. ಯಾವುದೇ ಕಾರ್ಮಿಕರಿಂದ ಮ್ಯಾನ್‌ಹೋಲ್‌ಗಳನ್ನು ಸ್ವಚ್ಛಗೊಳಿಸುವ

ಕಾಮಗಾರಿಯನ್ನು ಕೈಗೊಳ್ಳುತ್ತಿರುವುದಿಲ್ಲ ಎಂದು ಸಭೆಗೆ ತಿಳಿಸಿದರು. ಮತ್ತು ವಾರ್ಡಿನ ಕಿರಿಯ ಆರೋಗ್ಯ ನಿರೀಕ್ಷಕರು ಮಾತನಾಡಿ, ವಾರ್ಡಿನಲ್ಲಿ ದಿನನಿತ್ಯ ನಿರಂತರವಾಗಿ ಎಲ್ಲಾ ಪ್ರಮುಖ ರಸ್ತೆಗಳನ್ನು ಪೌರ ಕಾರ್ಮಿಕರು ಗುಡಿಸಿ ಸ್ವಚ್ಛ ಮಾಡುತ್ತಿರುತ್ತಾರೆ. ಸದರಿ ಪೌರ ಕಾರ್ಮಿಕರಿಗೆ ದಿನನಿತ್ಯ ಸುರಕ್ಷತೆಗಾಗಿ ಕೈ ಗವಸುಗಳನ್ನು ನೀಡಲಾಗುತ್ತಿದ್ದು, ಪೌರಕಾರ್ಮಿಕರು ಅವುಗಳನ್ನು ಕೈಗಳಿಗೆ ಅಳವಡಿಸಿಕೊಂಡು ಸ್ವಚ್ಛತಾ ಕಾರ್ಯವನ್ನು ನಿರ್ವಹಿಸುತ್ತಾರೆ ಎಂದು ಸಭೆಗೆ ತಿಳಿಸಿದರು.

2) **ಶ್ರೀ ಪ್ರಸನ್ನ, ಪದಾಧಿಕಾರಿಗಳು, ಹೆಚ್.ಬಿ.ಆರ್ ಬಡಾವಣೆ, 1ನೇ ಹಂತ ಅಸೋಸಿಯೇಷನ್ (ರಿ) ರವರು ಮಾತನಾಡಿ,** ಹೆಚ್.ಬಿ.ಆರ್ 1ನೇ ಹಂತ ಪ್ರದೇಶದಲ್ಲಿ ಸಿ.ಎ ನಿವೇಶನಗಳು ಸೇರಿದಂತೆ ಖಾಲಿ ನಿವೇಶನಗಳಿದ್ದು, ಇಲ್ಲಿ ಕಸವನ್ನು ಸುರಿಯುತ್ತಾರೆ. ಈ ನಿವೇಶನಗಳನ್ನು ಸ್ವಚ್ಛಗೊಳಿಸುವ ಅವಶ್ಯಕತೆ ಇರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಿ, ಸಭೆಯಲ್ಲಿ ಹಾಜರಿದ್ದ ಕಾಮಗಾರಿ ವಿಭಾಗದವರು ಉತ್ತರಿಸಿ, ಈಗಾಗಲೇ ಹೆಚ್.ಬಿ.ಆರ್ 1ನೇ ಹಂತದ ಖಾಲಿ ನಿವೇಶನಗಳಲ್ಲಿ ಜೆ.ಸಿ.ಬಿ ಯಂತ್ರದ ಮುಖಾಂತರ ಎಲ್ಲಾ ಖಾಲಿ ನಿವೇಶನಗಳಲ್ಲಿ ಬಿದ್ದಿರುವ ಕಸ ಹಾಗೂ ಇತರೆ ತ್ಯಾಜ್ಯವನ್ನು ತೆರವುಗೊಳಿಸಲಾಗಿರುತ್ತದೆ ಎಂದು ಸಭೆಗೆ ತಿಳಿಸಲಾಯಿತು ಮತ್ತು ಸದಸ್ಯರು ಶ್ರೀ ಪ್ರಸನ್ನ ರವರು ಸಿ.ಎ. ನಿವೇಶನಗಳ ಮಾಲೀಕರ ಮಾಹಿತಿಯನ್ನು ಸಂಗ್ರಹಿಸಿ ನೀಡುತ್ತೇನೆಂದು ಸಭೆಗೆ ತಿಳಿಸಿದರುತ್ತಾರೆ. ತದನಂತರ ಎಲ್ಲಾ ನಿವೇಶನ ಮಾಲೀಕರಿಗೆ ತಮ್ಮ ತಮ್ಮ ಖಾಲಿ ನಿವೇಶನಗಳನ್ನು ಸ್ವಚ್ಛಗೊಳಿಸಲು ನೋಟೀಸ್ ನೀಡಲಾಗುವುದೆಂದು ತಿಳಿಸಿದರು.

3) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ವಾರ್ಡ್ ಪ್ರದೇಶದ ವಿವಿಧ ಬಡಾವಣೆಗಳಲ್ಲಿ ಮರದ ರೆಂಬೆ ಕೊಂಬೆಗಳು ಬೃಹದಾಕಾರವಾಗಿ ವೃದ್ಧಿಯಾಗಿರುವುದರಿಂದ ರಸ್ತೆಗಳಲ್ಲಿ ಯಾವುದೇ ಚಟುವಟಿಕೆಗಳು ಅಳವಡಿಸಿರುವ ಸಿಸಿ ಕ್ಯಾಮೆರಾಗಳಲ್ಲಿ ಸೆರೆಯಾಗಿರುವುದಿಲ್ಲ ಮತ್ತು ವಿದ್ಯುತ್ ದೀಪಗಳು ಉರಿಯುತ್ತಿದ್ದರೂ ಸಹ ರಸ್ತೆಯಲ್ಲಿ ಕತ್ತಲು ಆವರಿಸಿರುತ್ತದೆ. ಇದರಿಂದ ಅಪಘಾತ ಹಾಗೂ ಕಳ್ಳತನಗಳಾಗುವ ಸಂಭವವಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಈ ಬಗ್ಗೆ ಚರ್ಚಿಸಿ, ಸಿಸಿ ಕ್ಯಾಮೆರಾಗಳಿಗೆ ಹಾಗೂ ವಿದ್ಯುತ್ ದೀಪಗಳಿಗೆ ಅಡ್ಡಲಾಗಿರುವ ಮರದ ಕೊಂಬೆಗಳನ್ನು ಕತ್ತರಿಸಲು ಅರಣ್ಯ ವಿಭಾಗದ ಗಮನಕ್ಕೆ ತರಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

4) **ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್, ರವರು ಮಾತನಾಡಿ** ಸಿ.ಎಂ.ಆರ್ ರಸ್ತೆಯಲ್ಲಿ ವೈಟ್ ಟಾಪಿಂಗ್ ರಸ್ತೆ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿರುತ್ತದೆ, ಸಿ.ಎಂ.ಆರ್ ವೃತ್ತದಲ್ಲಿ ಟ್ರಾಫಿಕ್ ಸಿಗ್ನಲ್ ದೀಪಗಳನ್ನು ತೆಗೆದುಹಾಕಲಾಗಿದ್ದು, ಈ ವೃತ್ತದಲ್ಲಿ ಹೆಚ್ಚು ವಾಹನ ಸಂಚಾರವಿರುತ್ತದೆ. ಆದ್ದರಿಂದ ಸಂಜೆಯ ಸಮಯದಲ್ಲಿ ಸಂಚಾರಿ ಪೋಲೀಸರನ್ನು ನಿಯೋಜಿಸಿ, ಸಂಚಾರವನ್ನು ನಿಯಂತ್ರಿಸಲು ಸಭೆಯಲ್ಲಿ ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ, ಸಂಚಾರಿ ಪೋಲೀಸ್ ಅಧಿಕಾರಿಗಳು ಸದರಿ ರಸ್ತೆಯಲ್ಲಿ ರಸ್ತೆ ನಿರ್ಮಾಣ ಕಾಮಗಾರಿ ನಡೆಯುತ್ತಿರುವುದರಿಂದ ಟ್ರಾಫಿಕ್ ಸಿಗ್ನಲ್‌ಗಳನ್ನು ತೆಗೆಯಲಾಗಿರುತ್ತದೆ. ರಸ್ತೆ ನಿರ್ಮಾಣ ಕಾಮಗಾರಿ ಪೂರ್ಣಗೊಂಡ ನಂತರ ಟ್ರಾಫಿಕ್

ಸಿಗ್ನಲ್‌ಗಳನ್ನು ಅಳವಡಿಸಲಾಗುವುದು ಮತ್ತು ಹೆಚ್ಚು ವಾಹನ ಸಂಚಾರ ಸಮಯದಲ್ಲಿ ಪೊಲೀಸರನ್ನು ನಿಯೋಜಿಸಿ, ಸಂಚಾರವನ್ನು ನಿಯಂತ್ರಿಸಲಾಗುವುದು ಎಂದು ಸಭೆಗೆ ತಿಳಿಸಿದರು.

5) **ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್, ರವರು ಮಾತನಾಡಿ** ಸುಖ್ ಸಾಗರ್ ರಸ್ತೆಯಲ್ಲಿ ಮತ್ತು ಕಮ್ಮನಹಳ್ಳಿ ಮುಖ್ಯರಸ್ತೆಯಲ್ಲಿ ರಾತ್ರಿ ಸಮಯದಲ್ಲಿ 11.00 ಗಂಟೆಯ ನಂತರ ಜನ ಗುಂಪು ಸೇರುವುದು, ದೂಮಪಾನ, ಮದ್ಯಪಾನ ಮಾಡಿ ಮತ್ತು ಗಲಾಟೆ ಮಾಡುವುದು ಇತ್ಯಾದಿ ಚಟುವಟಿಕೆಗಳು ನಡೆಯುತ್ತಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳಲು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ ಕಾನೂನು ಸುವ್ಯವಸ್ಥೆ ಪೊಲೀಸ್ ಅಧಿಕಾರಿಗಳು ಈ ಬಗ್ಗೆ ಗಸ್ತು ವಾಹನಕ್ಕೆ ಹೆಚ್ಚು ನಿಗಾ ಇಡಲು ಹಾಗೂ ಗಸ್ತನ್ನು ಸದರಿ ಸ್ಥಳಗಳಲ್ಲಿ ತೀವ್ರಗೊಳಿಸಲು ಸೂಚಿಸಲಾಗುವುದೆಂದು ಸಭೆಗೆ ತಿಳಿಸಿದರು.

6) **ವೈದ್ಯಾಧಿಕಾರಿಗಳು ಮಾತನಾಡಿ,** ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಕೋವಿಡ್-19 ನಿಯಂತ್ರಣದಲ್ಲಿದ್ದು, ಒಟ್ಟು 658 ಪ್ರಕರಣಗಳು ಇದ್ದು, 452 ಹೋಮ್ ಐಸೋಲೇಷನ್ ಪೂರ್ಣಗೊಳಿಸಿರುತ್ತಾರೆ, 182 ಜನ ಆಸ್ಪತ್ರೆಯಿಂದ ಗುಣಮುಖರಾಗಿ ಬಿಡುಗಡೆಯಾಗಿರುತ್ತಾರೆ. 20 ಜನ ಮರಣ ಹೊಂದಿರುತ್ತಾರೆ, ಸಕ್ರಿಯ ಪ್ರಕರಣಗಳು 04 ಆಗಿರುತ್ತವೆ. ನಂತರ ಮಾತನಾಡಿ, ವಾರ್ಡ್ ಪ್ರದೇಶದಲ್ಲಿ 22123 ಜನಕ್ಕೆ ಆರ್.ಟಿ.ಪಿ.ಸಿ.ಆರ್ ತಪಾಸಣೆ ಮಾಡಲಾಗಿರುತ್ತದೆ. 5621 ಜನಕ್ಕೆ ರ್ಯಾಪಿಡ್ ತಪಾಸಣೆ ಕೈಗೊಳ್ಳಲಾಗಿರುತ್ತದೆ. ಬಿಬಿಎಂಪಿ ಗೆ ಕೋವಿಶೀಲ್ಡ್ ವ್ಯಾಕ್ಸಿನ್ ಔಷಧಿ ಬಂದಿದ್ದು, ವಾರ್ಡ್ ಪ್ರದೇಶದಲ್ಲಿ 1) Lifewing Hospital 2) Zion Hospital and 3) Florence Nursing Home ಆಸ್ಪತ್ರೆಗಳನ್ನು ಗುರುತಿಸಿದ್ದು, ಪ್ರಥಮವಾಗಿ ಆರೋಗ್ಯ ಇಲಾಖೆಯ ಸಿಬ್ಬಂದಿಗೆ ಸುಮಾರು 1200 ವ್ಯಾಕ್ಸಿನೇಷನ್ ಔಷಧಿಯನ್ನು ಈಗಾಗಲೇ ನೀಡಲಾಗಿರುತ್ತದೆ. ಫ್ರಂಟ್‌ಲೈನ್ ಕಾರ್ಮಿಕರಿಗೆ ಸುಮಾರು 872 ಸಿಬ್ಬಂದಿಗೆ ವ್ಯಾಕ್ಸಿನೇಷನ್ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು ಹಾಗೂ ಇತ್ತೀಚೆಗೆ ಮಹಾರಾಷ್ಟ್ರ ಹಾಗೂ ಕೇರಳದಿಂದ ಆಗಮಿಸುವ ಸಾರ್ವಜನಿಕರು ಪತ್ತೆಯಾದಲ್ಲಿ ಕೋವಿಡ್ ಪರೀಕ್ಷೆಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

Prasanna Kumar. A
ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

**ಪ್ರತಿಯನ್ನು**

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.

17/03/21

ಜಂಟಿ ಆಯುಕ್ತರು (ಪೂರ್ವ)
ಡಿ.ಯೋ. ಡಾಲ್
ಸಂ.
ದಿನಾಂಕ 17/03/2021